# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1196 (1258)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು: ಕಂದಾಯ ಸಚಿವರು

ವಿಷಯ : ಭೂ ಪರಿವರ್ತನೆಯಾದ ಆಸ್ತಿಗಳ ಕುರಿತು ಮಾಹಿತಿ

(ಅ) ಭೂ ಪರಿವರ್ತನೆಯಾದ ಸ್ಥಳಗಳ ವಿವರಗಳನ್ನು ಹತ್ತಾರು ವರ್ಷ ಕಳೆದರೂ ಇನ್ನೂ ಪಹಣಿಯಲ್ಲಿ ದಾಖಲಿಸದಿರುವುದರಿಂದಾಗಿ ಕೆಲವರು ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಶೂನ್ಯ ಬಡ್ಡಿ ಸಾಲದಂತಹ ಯೋಜನೆಗಳ ಸವಲತ್ತುಗಳನ್ನು ಪಡೆಯುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಕೃಷಿ ಜಾಗವನ್ನು ವಾಸ್ತವ್ಯ, ವಾಣಿಜ್ಯ ಮತ್ತು ಕೈಗಾರಿಕಾ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಮಾಡಿದ ಸಂದರ್ಭದಲ್ಲಿ ಕಂದಾಯ ಇಲಾಖೆಯಿಂದ ಮಾಹಿತಿಯನ್ನು ಗ್ರಾಮ ಪಂಚಾಯತ್‌ಗಳಿಗೆ ನೀಡದೇ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಭೂ ಪರಿವರ್ತನೆಯಾದ ಎಲ್ಲಾ ಜಾಗಗಳಿಗೆ ಭೂ ತೆರಿಗೆಯನ್ನು ವಿಧಿಸಲು ಸಾಧ್ಯವಾಗದಿರುವುದು ನಿಜವೇ ;

(ಇ) ಸರ್ಕಾರಕ್ಕೆ ವರ್ಷಂಪ್ರತಿ ಲಕ್ಷಾಂತರ ರೂ.ತೆರಿಗೆ ನಷ್ಟವಾಗುತ್ತಿದ್ದು, ಈ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)